## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 668(724)

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 17-09-2021

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯತ್ ಗಳ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರಿಗೆ ಪಿಂಚಣಿ **(Pension)** ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ;<br><br>ಸದರಿ ಸದಸ್ಯರಿಗೆ ಪಿಂಚಣಿಯನ್ನು ನೀಡುವ ಕುರಿತಂತೆ ಸರ್ಕಾರದ ಸ್ಪಷ್ಟ ನಿಲುವೇನು;(ತಿಳಿಸುವುದು) | - ಇಲ್ಲ -<br><br>ತ್ರಿಸ್ತರ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಚುನಾಯಿತ ಪ್ರತಿನಿಧಿಗಳಿಗೆ ಪಿಂಚಣಿ ನೀಡುವ ಕುರಿತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರಲ್ಲಿ ಅವಕಾಶವಿರುವುದಿಲ್ಲ. |
| (ಆ) | ಸದರಿ ಸದಸ್ಯರಿಗೆ ಗೌರವಧನವನ್ನು ಪರಿಷ್ಕರಿಸಿ ಸುಮಾರು ಐದು(5) ವರ್ಷಗಳಾಗಿವೆ, ಬೆಲೆ ಏರಿಕೆಯಂತಹ ಪ್ರಸ್ತುತ ಸನ್ನಿವೇಶದಲ್ಲಿ ಗೌರವಧನವನ್ನು ಇಂದಿನ ಸ್ಥಿತಿಗತಿಗೆ ತಕ್ಕಂತೆ ಹೆಚ್ಚಿಸುವ ಕುರಿತಂತೆ ಸರ್ಕಾರದ ಸ್ಪಷ್ಟ ನಿಲುವೇನು; (ತಿಳಿಸುವುದು) | ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿದೆ. |
| (ಇ) | ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರಿಗೆ ಸರ್ಕಾರಿ ಕೆಲಸ ಕಾರ್ಯಗಳಿಗೆ ಮತ್ತು ತಮ್ಮ ಗ್ರಾಮಗಳ ಅಭಿವೃದ್ಧಿಗೆ ಓಡಾಡಲು ಉಚಿತ ಬಸ್ ಪಾಸ್ ನೀಡುವ ಕುರಿತಂತೆ ಸರ್ಕಾರದ ಸ್ಪಷ್ಟ ನಿಲುವೇನು? (ತಿಳಿಸುವುದು) | ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಮಾಡಿದ ಪ್ರಯಾಣಕ್ಕಾಗಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. |

ಸಂಖ್ಯೆ: ಗ್ರಾಅಪಂರಾ 386 ಜಿಪಸ 2021

(ಕೆ.ಎಸ್ ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 75 ಜಿಪಸ 2014, ಬೆಂಗಳೂರು, ದಿನಾಂಕ:06-12-2014.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 75 ಜಿಪಸ 2016, ಬೆಂಗಳೂರು, ದಿನಾಂಕ:19-11-2016.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 189 ಜಿಪಸ 2016, ಬೆಂಗಳೂರು, ದಿನಾಂಕ:25-11-2016.

ಪ್ರಸ್ತಾವನೆ:

ಮೇಲೆ ಓದಲಾದ(1) ಆದೇಶದಲ್ಲಿ 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ದಿನಾಂಕ:01-04-2014 ರಿಂದ ಅನ್ವಯಿಸುವಂತೆ ಇಮ್ಮಡಿಗೊಳಿಸಿದ್ದು, ಪರಿಷ್ಕೃತ ಗೌರವಧನ ಈ ಕೆಳಕಂಡಂತಿದೆ.

| | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 1000 | 4500 | 6000 |
| ಉಪಾಧ್ಯಕ್ಷರು | 600 | 3000 | 4500 |
| ಸದಸ್ಯರು | 500 | 1500 | 3000 |

ಮೇಲೆ ಓದಲಾದ (2)ರ ಆದೇಶದಲ್ಲಿ ಎಲ್ಲಾ ಜಿಲ್ಲಾ ಪಂಚಾಯತ್‌ನ ಅಧ್ಯಕ್ಷರುಗಳಿಗೆ ಸಚಿವರ ಸ್ಥಾನಮಾನ ನೀಡಲಾಗಿದ್ದು, ಅವರ ವೇತನವನ್ನು ರೂ.35,000ಗಳಿಗೆ ಹೆಚ್ಚಿಸಲಾಗಿದೆ.

ಮೇಲೆ ಓದಲಾದ (3)ರ ಆದೇಶದಲ್ಲಿ ಎಲ್ಲಾ ಜಿಲ್ಲಾ ಪಂಚಾಯತ್‌ನ ಉಪಾಧ್ಯಕ್ಷರುಗಳ ಗೌರವಧನವನ್ನು ರೂ.15,000ಗಳಿಗೆ ಹೆಚ್ಚಿಸಲಾಗಿದೆ.

2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ದಿನಾಂಕ:01-04-2017 ರಿಂದ ಅನ್ವಯಿಸುವಂತೆ ಹೆಚ್ಚಿಸಲು ಘೋಷಣೆ ಮಾಡಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 116 ಜಿಪಸ 2017, ಬೆಂಗಳೂರು, ದಿನಾಂಕ:03-05-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ದಿನಾಂಕ:01-04-2017 ರಿಂದ ಅನ್ವಯಿಸುವಂತೆ ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

| | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 3000 | 6000 | 35000 |
| ಉಪಾಧ್ಯಕ್ಷರು | 2000 | 4000 | 15000 |
| ಸದಸ್ಯರು | 1000 | 3000 | 5000 |

ಮೇಲಿನ ವೆಚ್ಚವನ್ನು ಜಿಲ್ಲಾ ಪಂಚಾಯತ್‌ನ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಲೆಕ್ಕ ಶೀರ್ಷಿಕೆ:2515-00-101-0-35-324(2515-00-196-1-05-300), ತಾಲ್ಲೂಕು ಪಂಚಾಯತ್‌ಗೆ ಲೆಕ್ಕ ಶೀರ್ಷಿಕೆ: 2515-00-102-0-69-324(2515-00-197-1-10-300) ಹಾಗೂ ಗ್ರಾಮ ಪಂಚಾಯತ್‌ನ ಚುನಾಯಿತ ಪ್ರತಿನಿಧಿಗಳಿಗೆ ಲೆಕ್ಕ ಶೀರ್ಷಿಕೆ:2515-00-103-0-98-324(2515-00-198-1-11-300) ರಡಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

3/8/17
(ಕೆ.ಯಾಲಕ್ಕೀಗೌಡ)
ನಿರ್ದೇಶಕರು (ಪಂ.ರಾಜ್-2)ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
6. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
7. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
10. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
11. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
12. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.